ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ    ದಿನಾಂಕ : DATE : 14/3/2019

# ಮಾಜಿ ಶಾಸಕರಿಗೆ ಹೈಕೋರ್ಟ್ ತರಾಟೆ

ಬೆಂಗಳೂರು: ಕೋರ್ಟ್ ಹಾಜರಾತಿಗೆ ವಿನಾಯಿತಿ ಪಡೆಯಲು ಬೇರೆಯವರನ್ನು ಕೊಲ್ಲಬೇಡಿ ಎಂದು ಹುನಗುಂದ ಕ್ಷೇತ್ರದ ಮಾಜಿ ಶಾಸಕ ವಿಜಯಾನಂದ ಕಾಶಪ್ಪನವರ್ ವಿರುದ್ಧ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅಸಮಾಧಾನ ವ್ಯಕ್ತಪಡಿಸಿದೆ.

» **ಸ್ವಾರ್ಥಕ್ಕಾಗಿ ಬೇರೆಯವರ ಕೊಲ್ಲಬೇಡಿ**

2013ರ ವಿಧಾನಸಭೆ ಚುನಾವಣೆ ವೇಳೆ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣದಲ್ಲಿ ಬುಧವಾರ ಹಾಜರಾಗಲು ಕೋರ್ಟ್ ಸಮನ್ಸ್ ನೀಡಿತ್ತು. ಸಂಬಂಧಿಕರು ಮೃತಪಟ್ಟ ಕಾರಣ ಅಂತಿಮ ಸಂಸ್ಕಾರ ಕಾರ್ಯಕ್ಕೆ ತೆರಳಿದ್ದರಿಂದ ವಿನಾಯಿತಿ ನೀಡುವಂತೆ ವಕೀಲರು ಅರ್ಜಿ ಸಲ್ಲಿಸಿದರು. ಈ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ನ್ಯಾಯಾಧೀಶ ರಾಮಚಂದ್ರ ಡಿ. ಹುದ್ದಾರ್, 'ನೀವು ಹಾಜರಾಗುವುದರಿಂದ ವಿನಾಯಿತಿ ಪಡೆಯಲು ಬೇರೆಯವರನ್ನು ಕೊಲ್ಲಬೇಡಿ' ಎಂದು ಜಾಮೀನುರಹಿತ ವಾರೆಂಟ್ ಜಾರಿ ಮಾಡಿ 18ಕ್ಕೆ ವಿಚಾರಣೆ ಮುಂದೂಡಿದರು.